Akashvani : Bangalore
Regional Bulletin In Kannada
06.07.2026 / 18.40 hrs
ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

ಮುಖ್ಯಾಂಶಗಳು

- ಹಾವೇರಿ ಜಿಲ್ಲೆಯಲ್ಲಿ ಮೋಡಬಿತ್ತನೆಗೆ ಚಾಲನೆ; ಅಗತ್ಯಬಿದ್ದರೆ ರಾಜ್ಯದೆಲ್ಲೆಡೆ ವಿಸ್ತರಿಸಲು ಚಿಂತನೆ- ಸಚಿವ ಸತೀಶ್ ಜಾರಕಿ ಹೊಳಿ
- ಮುಖ್ಯಮಂತ್ರಿ, ಉಪಮುಖ್ಯಮಂತ್ರಿ ಇಂದಿನಿಂದ ಉತ್ತರ ಕರ್ನಾಟಕ ಪ್ರವಾಸ; ಅಭಿವೃದ್ಧಿ ಯೋಜನೆ ಕುರಿತಂತೆ ಪ್ರಗತಿ ಪರಿಶೀಲನೆ
- ರಾಜ್ಯದಲ್ಲಿ ಕೇಂದ್ರ ಸರ್ಕಾರದ ಗ್ರಾಮೀಣಾಭಿವೃದ್ಧಿ ಯೋಜನೆಗಳ ಅನುಷ್ಠಾನ ಕುರಿತಂತೆ ಉನ್ನತ ಅಧಿಕಾರಿಗಳಿಂದ ಪರಾಮರ್ಶೆ
- ಮಹಾರಾಷ್ಟ್ರದ ಘಟ್ಟ ಪ್ರದೇಶದಲ್ಲಿ ಧಾರಾಕಾರ ಮಳೆ; ಕೃಷ್ಣಾ, ದೂದ್‌ಗಂಗಾ, ವೇದ್‌ಗಂಗಾ ನದಿಗಳ ನೀರಿನ ಮಟ್ಟ ಗಣನೀಯ ಹೆಚ್ಚಳ
- ಉತ್ತರಕನ್ನಡ, ಉಡುಪಿ, ಶಿವಮೊಗ್ಗ ಜಿಲ್ಲೆಗಳಲ್ಲಿ ಭಾರೀ ಮಳೆ ಸಾಧ್ಯತೆ; ರೆಡ್ ಅಲರ್ಟ್ ಘೋಷಿಸಿದ ಹವಾಮಾನ ಇಲಾಖೆ

———————————

ಹಾವೇರಿ ಜಿಲ್ಲೆಯ ಎಲ್ಲಾ ಶಾಸಕರು ಕೈಗೊಂಡಿರುವ ಮೋಡ ಬಿತ್ತನೆಗೆ ಹುಬ್ಬಳ್ಳಿ ವಿಮಾನ ನಿಲ್ದಾಣದಲ್ಲಿಂದು ಲೋಕೋಪಯೋಗಿ ಸಚಿವ ಸತೀಶ್ ಜಾರಕಿ ಹೊಳಿ ಹಾಗೂ ಮಾಜಿ ಸಚಿವ ಎಚ್.ಕೆ.ಪಾಟೀಲ್ ಚಾಲನೆ ನೀಡಿದರು.

ಬಳಿಕ ಮಾತನಾಡಿದ ಸತೀಶ್ ಜಾರಕಿ ಹೊಳಿ, ಹಾವೇರಿ ಜಿಲ್ಲೆಯಾದ್ಯಂತ ಮೂರು ದಿನಗಳ ಕಾಲ ಮೋಡ ಬಿತ್ತನೆ ಮಾಡಲಾಗುವುದು ಎಂದು ತಿಳಿಸಿದ್ದಾರೆ.

ಉತ್ತರ ಕರ್ನಾಟಕ ಭಾಗದ ಜಿಲ್ಲೆಗಳಲ್ಲಿ ವಾಡಿಕೆಗಿಂತ ಮಳೆ ಕಡಿಮೆಯಾಗಿದ್ದು, ಹಾವೇರಿಯಲ್ಲಿ ಮೋಡ ಬಿತ್ತನೆ ಮಾಡಲಾಗುತ್ತಿದೆ. ಉತ್ತರ ಕರ್ನಾಟಕದ ವಿವಿಧ ಜಿಲ್ಲೆಗಳಲ್ಲಿ ಮೋಡ ಬಿತ್ತನೆ ಮಾಡುವ ಬಗ್ಗೆ ಮುಖ್ಯಮಂತ್ರಿಗಳನ್ನು ಭೇಟಿ ಮಾಡಿ, ಮನವಿ ಮಾಡಲಾಗುವುದು ಎಂದು ಹೇಳಿದ್ದಾರೆ.

ಧ್ವನಿ: ಸತೀಶ್ ಜಾರಕಿ ಹೊಳಿ

ಶಾಸಕ ಎಚ್.ಕೆ.ಪಾಟೀಲ ಮಾತನಾಡಿ, ಬರಗಾಲ ಪರಿಸ್ಥಿತಿ ಅರಿತು ಮೋಡ ಬಿತ್ತನೆಗೆ ಮುಂದಾಗಿದ್ದು, ವೈಜ್ಞಾನಿಕ ತಂತ್ರಜ್ಞಾನ ಬಳಸಿ, ಮೋಡ ಬಿತ್ತನೆ ಕಾರ್ಯಕ್ಕೆ ಚಾಲನೆ ನೀಡಲಾಗಿದೆ ಎಂದು ಹೇಳಿದರು.

---

ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಇಂದಿನಿಂದ ಉತ್ತರಕರ್ನಾಟಕ ಪ್ರವಾಸ ಆರಂಭಿಸಿದ್ದಾರೆ. ಎರಡು ದಿನಗಳ ಕಲ್ಯಾಣ ಕರ್ನಾಟಕದ ಪ್ರವಾಸದಲ್ಲಿ ಅಭಿವೃದ್ಧಿ ಕುರಿತಂತೆ ಸಮಗ್ರ ಪ್ರಗತಿ ಪರಿಶೀಲನೆ ನಡೆಸಲಾಗುವುದು ಎಂದು ತಿಳಿಸಿದ್ದಾರೆ.

ಈ ಕುರಿತು ಸಾಮಾಜಿಕ ಮಾಧ್ಯಮದಲ್ಲಿ ಮಾಹಿತಿ ಹಂಚಿಕೊಂಡಿರುವ ಅವರು, ಮುಖ್ಯಮಂತ್ರಿಯಾಗಿ ಅಧಿಕಾರ ಸ್ವೀಕರಿಸಿದ ಬಳಿಕ ಮೊದಲ ಬಾರಿಗೆ ಬೀದರ್, ಕಲಬುರಗಿ ಜಿಲ್ಲೆಗಳಿಂದಲೇ ಪ್ರವಾಸ ಆರಂಭಿಸುತ್ತಿರುವುದು ಸಂತಸ ತಂದಿದೆ. ಈ ಭಾಗದ ಜನರ ರಾಜಕೀಯ, ಆಡಳಿತಾತ್ಮಕ ಹಾಗೂ ಸಾಂಸ್ಕೃತಿಕ ಬದ್ಧತೆಗೆ ಸಾಕ್ಷಿಯಾಗಲು ಬಯಸಿರುವುದಾಗಿ ತಿಳಿಸಿದ್ದಾರೆ.

ಸಾಮಾಜಿಕ ಸಾಮರಸ್ಯ ಸೌಹಾರ್ಧತೆ ಇಲ್ಲದೆ ಯಾವುದೇ ಪ್ರದೇಶದ ಅಭಿವೃದ್ಧಿ ಹಾಗೂ ಪ್ರಗತಿ ಸಾಧ್ಯವಿಲ್ಲ ಎಂದು ಅಭಿಪ್ರಾಯಪಟ್ಟಿದ್ದಾರೆ.

---

ರಾಜ್ಯವು ಬರಗಾಲ ಎದುರಿಸಬೇಕಾದ ಸಂದರ್ಭ ಬಂದಿದ್ದು, ಬರ ಪರಿಸ್ಥಿತಿಯನ್ನು ಸಮರ್ಥವಾಗಿ ನಿಭಾಯಿಸಲು ಕೈಗೊಳ್ಳಬೇಕಿರುವ ಕ್ರಮಗಳ ಕುರಿತು ಅಧಿಕಾರಿಗಳಿಗೆ ಅಗತ್ಯ ನಿರ್ದೇಶನ ನೀಡಲಾಗಿದೆ ಎಂದು ಉಪ ಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್ ತಿಳಿಸಿದ್ದಾರೆ.

ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈಗಾಗಲೇ ಬೆಳಗಾವಿ, ಚಿತ್ರದುರ್ಗ, ತುಮಕೂರು ಜಿಲ್ಲೆಗಳಲ್ಲಿ ಪ್ರಗತಿ ಪರಿಶೀಲನಾ ಸಭೆ ನಡೆಸಲಾಗಿದೆ. ರಾಜ್ಯದಲ್ಲಿ ಜಲಾಶಯಗಳು ಡೆಡ್ ಸ್ಟೋರೇಜ್‌ಗೆ ತಲುಪಿರುವುದರಿಂದ ನೀರನ್ನು ಎಚ್ಚರಿಕೆಯಿಂದ ಬಳಸಬೇಕು. ಲಭ್ಯವಿರುವ ನೀರನ್ನು ಕುಡಿಯಲು ಹೊರತುಪಡಿಸಿ, ಬೇರೆ ಯಾವುದೇ ರೀತಿಯ ಉದ್ದೇಶಕ್ಕೆ ಬಳಕೆಯಾಗದಂತೆ ನೋಡಿಕೊಳ್ಳಬೇಕು ಎಂದು ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಲಾಗಿದೆ ಎಂದು ತಿಳಿಸಿದ್ದಾರೆ.

ಮುಖ್ಯಮಂತ್ರಿಗಳ ಜೊತೆ ಇಂದು ಬೀದರ್‌ಗೆ ತೆರಳಲಿದ್ದು, ನಾಳೆ ಕಲಬುರಗಿ ಜಿಲ್ಲೆಗೆ ತೆರಳಿ ಪ್ರಗತಿ ಪರಿಶೀಲನಾ ಸಭೆ ನಡೆಸಲಾಗುವುದು ಎಂದು ಹೇಳಿದ್ದಾರೆ.

ಇದೇ ವೇಳೆ, ಎಸ್‌ಐಆರ್ ಕುರಿತಂತೆ ಪ್ರತಿಕ್ರಿಯಿಸಿದ ಪರಮೇಶ್ವರ್ ಚುನಾವಣಾ ಆಯೋಗದ ಸೂಚನೆಯಂತೆ ಪ್ರಕ್ರಿಯೆ ನಡೆಯುತ್ತಿದ್ದು, ಪ್ರತಿ ಪಕ್ಷಗಳು, ರಾಜಕೀಯ ಮಾಡುವುದರಲ್ಲಿ ಅರ್ಥವಿಲ್ಲ ಎಂದು ತಿಳಿಸಿದ್ದಾರೆ.

---

ರಾಜ್ಯದಲ್ಲಿ ಕೇಂದ್ರ ಸರ್ಕಾರದ ಗ್ರಾಮೀಣಾಭಿವೃದ್ಧಿ ಯೋಜನೆಗಳ ಅನುಷ್ಠಾನ ಸುಗಮವಾಗಿ ಸಾಗುತ್ತಿದ್ದು, ಯೋಜನೆಗಳ ಪರಿಣಾಮಕಾರಿ ಜಾರಿಗಾಗಿ ರಾಜ್ಯ ಸರ್ಕಾರದೊಂದಿಗೆ ನಿರಂತರ

ಸಹಕಾರ ಮುಂದುವರಿಸಲಾಗುವುದು ಎಂದು ಕೇಂದ್ರ ಗ್ರಾಮೀಣಾಭಿವೃದ್ಧಿ ಸಚಿವಾಲಯದ ಉನ್ನತ ಮಟ್ಟದ ಅಧಿಕಾರಿಗಳ ತಂಡ ತಿಳಿಸಿದೆ.

ಕೇಂದ್ರ ಗ್ರಾಮೀಣಾಭಿವೃದ್ಧಿ ಸಚಿವಾಲಯದ ಉಪ ಮಹಾನಿರ್ದೇಶಕರು ಹಾಗೂ ಸಂಖ್ಯಾಶಾಸ್ತ್ರ ಸಲಹೆಗಾರರಾದ ಅಲ್ತಾಫ್ ಹುಸೇನ್ ಹಾಜಿ ನೇತೃತ್ವದ ತಂಡ ರಾಜ್ಯಕ್ಕೆ ಭೇಟಿ ನೀಡಿದ್ದು, ಹಿರಿಯ ಅಧಿಕಾರಿಗಳೊಂದಿಗೆ 'ವಿಕಸಿತ ಭಾರತ್ ಗ್ಯಾರಂಟಿ ಫಾರ್ ರೋಜ್‌ಗಾರ್ ಯೋಜನೆಯ ಅನುಷ್ಠಾನದ ಪ್ರಗತಿ ಪರಿಶೀಲಿಸಿತು.

ಸಭೆಯಲ್ಲಿ ರಾಜ್ಯದಲ್ಲಿ ಯೋಜನೆಯ ಅನುಷ್ಠಾನ ನಿಗದಿತ ವೇಳಾಪಟ್ಟಿಯಂತೆ ಪ್ರಗತಿಯಲ್ಲಿದ್ದು, ಯಾವುದೇ ಪ್ರಮುಖ ಅಡಚಣೆಗಳಿಲ್ಲ ಎಂದು ಅಧಿಕಾರಿಗಳು ಮಾಹಿತಿ ನೀಡಿದ್ದಾರೆ.

---

ಬೆಂಗಳೂರಿನ ಅಭಿವೃದ್ಧಿಗೆ ಪ್ರಚಾರದ ದಾರಿ ತ್ಯಜಿಸಿ, ಕಸದ ಸಮಸ್ಯೆಯನ್ನು ಬಗೆಹರಿಸುವಂತೆ ಪ್ರತಿಪಕ್ಷ ನಾಯಕ ಆರ್.ಅಶೋಕ, ಜಿಬಿಎ ನಗರಾಭಿವೃದ್ಧಿ ಸಚಿವ ಕೃಷ್ಣಬೈರೇಗೌಡ ಅವರನ್ನು ಎಕ್ಸ್‌ನಲ್ಲಿ ಒತ್ತಾಯಿಸಿದ್ದಾರೆ.

ಬೆಂಗಳೂರು ಇಂದು ಕಸದ ರಾಶಿ, ದುರ್ವಾಸನೆ ಹಾಗೂ ಸಾಂಕ್ರಾಮಿಕ ರೋಗಗಳ ಬೀತಿಯಿಂದ ತತ್ತರಿಸಿ ಹೋಗಿದೆ. ನಗರದಲ್ಲಿ ಪ್ರತಿದಿನ ಐದು ಸಾವಿರದ ೫೦೦ ಟನ್ ಘನತ್ಯಾಜ್ಯ ಉತ್ಪತ್ತಿಯಾಗುತ್ತಿದ್ದರೂ ಕಸದ ನಿರ್ವಹಣೆಯನ್ನು ನಿಭಾಯಿಸಲು ಸರ್ಕಾರ ವಿಫಲವಾಗಿದೆ ಎಂದು ಆರೋಪಿಸಿದ್ದಾರೆ.

ಬೆಂಗಳೂರಿನ ಕಸದ ಸಮಸ್ಯೆಯನ್ನು ಶ್ರೀಘ್ರವೇ ಬಗೆಹರಿಸುವಂತೆ ಆಗ್ರಹಿಸಿದ್ದಾರೆ.

---

ಇನ್ನು ಹವಾವರ್ತಾಮಾನ...

ಕರಾವಳಿ ಜಿಲ್ಲೆಗಳಾದ ಉತ್ತರಕನ್ನಡ ಹಾಗೂ ಉಡುಪಿ, ಮಲೆನಾಡಿನ ಶಿವಮೊಗ್ಗ ಜಿಲ್ಲೆಗಳಲ್ಲಿ ಇಂದು ಭಾರೀ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

ಮುನ್ನೆಚ್ಚರಿಕಾ ಕ್ರಮವಾಗಿ ಈ ಜಿಲ್ಲೆಗಳಲ್ಲಿ ರೆಡ್ ಅಲರ್ಟ್ ಘೋಷಿಸಲಾಗಿದೆ. ಈ ಜಿಲ್ಲೆಗಳಲ್ಲಿ ಗಾಳಿಯ ವೇಗ ಗಂಟೆಗೆ ೫೦ ರಿಂದ ೬೦ ಕಿಲೋಮೀಟರ್ ನಷ್ಟು ಇರಲಿದೆ. ನಾಳೆಯಿಂದ ಇದೇ ೧೧ರವರೆಗೆ ಘಟ್ಟಪ್ರದೇಶದ ಒಂದೆರಡು ಕಡೆ ಭೂಕುಸಿತ ಸಂಭವಿಸುವ ಸಾಧ್ಯತೆಯಿದೆ ಎಂದು ರಾಜ್ಯದ ಹವಾಮಾನ ಇಲಾಖೆ ತಿಳಿಸಿದೆ.

---

ಪಶ್ಚಿಮ ಮಹಾರಾಷ್ಟ್ರದ ಘಟ್ಟ ಪ್ರದೇಶದಲ್ಲಿ ಕಳೆದ ಎರಡು ದಿನಗಳಿಂದ ಸುರಿಯುತ್ತಿರುವ ಭಾರೀ ಮಳೆಯಿಂದ ಕೃಷ್ಣಾ, ದೂದ್‌ಗಂಗಾ ಹಾಗೂ ವೇದ್‌ಗಂಗಾ ನದಿಗಳಲ್ಲಿ ನೀರಿನ ಹರಿವು ಗಣನೀಯವಾಗಿ ಹೆಚ್ಚಳವಾಗಿದೆ.

ಬೇಸಿಗೆಯಲ್ಲಿ ಸಂಪೂರ್ಣ ಬತ್ತಿಹೋಗಿದ್ದ ವೇದಗಂಗಾ ನದಿ ಈಗ ಒಡಲು ತುಂಬಿ ಹರಿಯುತ್ತಿದ್ದು, ನದಿ ತೀರದ ಗ್ರಾಮಗಳ ರೈತರಲ್ಲಿ ಸಂತಸ ಮನೆ ಮಾಡಿದೆ.

ಮಹಾರಾಷ್ಟ್ರದ ಕೊಲ್ಲಾಪುರ, ಸಾಂಗ್ಲಿ, ಸಾತಾರಾ ಸೇರಿದಂತೆ ಪಶ್ಚಿಮ ಘಟ್ಟ ಪ್ರದೇಶದಲ್ಲಿ ನಿರಂತರ ಮಳೆಯಾಗುತ್ತಿರುವ ಪರಿಣಾಮ ಕೃಷ್ಣಾ ಮತ್ತು ದೂಧಗಂಗಾ ನದಿಗಳಲ್ಲಿ ಸುಮಾರು ಐದು ಅಡಿಯಷ್ಟು ನೀರಿನ ಮಟ್ಟ ಏರಿಕೆಯಾಗಿದೆ.

ಮುಂದಿನ ಎರಡು-ಮೂರು ದಿನಗಳ ಕಾಲ ಕೊಂಕಣ ಹಾಗೂ ಪಶ್ಚಿಮ ಘಟ್ಟ ಪ್ರದೇಶಗಳಲ್ಲಿ ಭಾರೀ ಮಳೆಯಾಗುವ ಸಾಧ್ಯತೆ ಇದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಪರಿಣಾಮವಾಗಿ ಕೃಷ್ಣಾ, ದೂದ್‌ಗಂಗಾ ಸೇರಿದಂತೆ ಪ್ರಮುಖ ನದಿಗಳ ನೀರಿನ ಮಟ್ಟ ಮತ್ತಷ್ಟು ಏರಿಕೆಯಾಗುವ ಸಾಧ್ಯತೆಯಿದ್ದು, ನದಿ ತೀರದ ನಿವಾಸಿಗಳು ಎಚ್ಚರಿಕೆ ವಹಿಸುವಂತೆ ಬೆಳಗಾವಿ ಜಿಲ್ಲಾಡಳಿತ ಸೂಚಿಸಿದೆ.

---

ಬೆಂಗಳೂರಿನ ಕಲ್ಲು ಕ್ವಾರಿಯಲ್ಲಿ ಬಂಡೆ ಕುಸಿದು ಏಳು ಕಾರ್ಮಿಕರು ಮೃತಪಟ್ಟ ಪ್ರಕರಣಕ್ಕೆ ಸಂಬಂಧಿಸಿದಂತೆ ರಾಷ್ಟ್ರೀಯ ಮಾನವ ಹಕ್ಕುಗಳ ಆಯೋಗ ಸ್ವಯಂ ಪ್ರೇರಿತವಾಗಿ ದೂರು ದಾಖಲಿಸಿಕೊಂಡಿದೆ.

ರಾಜ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿಗೆ ನೋಟಿಸ್ ಜಾರಿಗೊಳಿಸಿ ಘಟನೆ ಕುರಿತು ಸಮಗ್ರ ವರದಿಯನ್ನು ಎರಡು ವಾರದೊಳಗೆ ಸಲ್ಲಿಸುವಂತೆ ನಿರ್ದೇಶಿಸಿದೆ.

ಜುಲೈ ೨ ರಂದು ಸಂಭವಿಸಿದ ದುರಂತದಲ್ಲಿ ಏಳು ಮಂದಿ ಸಾವನ್ನಪ್ಪಿ, ಐವರು ಕಾರ್ಮಿಕರು ಗಂಭೀರವಾಗಿ ಗಾಯಗೊಂಡಿದ್ದರು.

---

ಎಚ್.ಎಂ.ಟಿ ಸಂಸ್ಥೆಯ ಪುನರುಜ್ಜೀವನಗೊಳಿಸುವ ಕೇಂದ್ರ ಸರ್ಕಾರದ ನಿರ್ಧಾರವನ್ನು ರಾಜ್ಯ ಸರ್ಕಾರ ಹತ್ತಿಕ್ಕುತ್ತಿದೆ ಎಂದು ಕೇಂದ್ರ ಬೃಹತ್ ಕೈಗಾರಿಕೆ ಮತ್ತು ಉಕ್ಕು ಖಾತೆ ಸಚಿವ ಎಚ್.ಡಿ.ಕುಮಾರಸ್ವಾಮಿ ಆರೋಪಿಸಿದ್ದಾರೆ.

ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಅರಣ್ಯ ಇಲಾಖೆಯ ಮೂಲಕ ಸರ್ಕಾರ ಅಡತಡೆಗಳನ್ನು ಸೃಷ್ಟಿಸುತ್ತಿದೆ ಎಂದು ದೂರಿದ್ದಾರೆ.

ರಾಜ್ಯದಲ್ಲಿ ಕೇಂದ್ರ ಸರ್ಕಾರಿ ಸ್ವಾಮ್ಯದ ಕಾರ್ಖಾನೆಗಳು ಉಳಿಯಬಾರದು ಎಂಬ ನಿರ್ಧಾರಕ್ಕೆ ರಾಜ್ಯ ಸರ್ಕಾರ ಬಂದಿದೆ. ಎನ್‌ಜಿಎಫ್, ಮೈಸೂರು ಪೇಪರ್ ಮಿಲ್ಸ್ ಹಾಗೂ ಇತರ ಹಲವಾರು ಉದ್ಯಮಗಳನ್ನು ಈಗಾಗಲೇ ಸ್ಥಗಿತಗೊಳಿಸಲಾಗಿದೆ. ಇದೀಗ ಸರ್ಕಾರದ ವಕ್ರದೃಷ್ಟಿ ಎಚ್.ಎಮ್.ಟಿ ಸಂಸ್ಥೆಯ ಮೇಲೆ ಬಿದ್ದಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

---

ರಾಜ್ಯದಲ್ಲಿ ೫ ಕೋಟಿ ೬೫ ಲಕ್ಷ ಮತದಾರರ ಮ್ಯಾಪಿಂಗ್ ಆಗಿದ್ದು, ೫೦ ಲಕ್ಷ ಜನರನ್ನು ಕೈಬಿಡಲು ನಿರ್ಧರಿಸಲಾಗಿದೆ ಎಂದು ಕೆಪಿಸಿಸಿ ಅಧ್ಯಕ್ಷ ಬಿ.ಕೆ.ಹರಿಪ್ರಸಾದ್ ಆರೋಪಿಸಿದ್ದಾರೆ.

ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಚುನಾವಣೆ ಪ್ರಕ್ರಿಯೆ, ಮತಪಟ್ಟಿ ರಚನೆ ಹೇಗೆ ಮಾಡಬೇಕು ಎಂದು ಸಂವಿಧಾನದ ವಿವಿಧ ಪರಿಚ್ಛೇಧದಲ್ಲಿ ತಿಳಿಸಲಾಗಿದೆ. ಪಶ್ಚಿಮ ಬಂಗಳಾದಲ್ಲಿ ೬೧ ಲಕ್ಷ ಮತಗಳನ್ನು ಮತಪಟ್ಟಿಯಿಂದ ಕೈಬಿಡಲಾಗಿದ್ದು, ೨೭ ಲಕ್ಷ ಜನರಿಗೆ ಮತದಾನ ಮಾಡಲು ಅವಕಾಶ ನೀಡದಿರುವುದು ಪ್ರಜಾಪ್ರಭುತ್ವದ ಆಶಯದ ವಿರುದ್ಧವಾಗಿದೆ ಎಂದು ತಿಳಿಸಿದ್ದಾರೆ

__________ ಮುಕ್ತಾಯ ___________